ಕರ್ನಾಟಕ ಸರ್ಕಾರ

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲ್ಲೂಕು ವಲ್ಲಭಾಪುರ ಗ್ರಾಮವನ್ನು ಗ್ರಾಮ ಪಂಚಾಯತಿಯನ್ನಾಗಿ ರಚಿಸುವ ಬಗ್ಗೆ.

**ಓದಲಾಗಿದೆ:** ಬಳ್ಳಾರಿ ಜಿಲ್ಲಾಧಿಕಾರಿಗಳ ಪತ್ರ ಸಂಖ್ಯೆ ಚುನಾವಣೆ:48:2015-16, ದಿನಾಂಕ 11.12.2015.

---

**ಪ್ರಸ್ತಾವನೆ :**

ಮೇಲೆ ಓದಲಾದ ಪತ್ರದಲ್ಲಿ ಬಳ್ಳಾರಿ ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ 17-ಚಿಂತ್ರಪಳ್ಳಿ ಗ್ರಾಮ ಪಂಚಾಯತಿಯ ಭಾಗಶಃ ಗ್ರಾಮಗಳು ಪುರಸಭೆ ಹಗರಬೊಮ್ಮನಹಳ್ಳಿ ವ್ಯಾಪ್ತಿಗೆ ಸೇರ್ಪಡೆಗೊಂಡಿರುವುದರಿಂದ, ಪುರಸಭೆ ಪ್ರದೇಶಕ್ಕೆ ಸೇರ್ಪಡೆಯಾಗದೇ ಹಾಗೇ ಉಳಿದ ಗ್ರಾಮಗಳಾದ ಕೆಂಚಿನಬಂಡಿ, ಬ್ಯಾಲಹುಣಸೆ(ಮ), ಬಂಡಿಹಳ್ಳಿ(ಮ) ಮತ್ತು ವಲ್ಲಭಾಪುರ(ಮ) ಗ್ರಾಮಗಳ ಜನಸಂಖ್ಯೆ 2011 ರ ಜನಗಣತಿಯ ಪ್ರಕಾರ 4702 ಇದ್ದು, ವಲ್ಲಭಾಪುರ ಗ್ರಾಮವನ್ನು ಕೇಂದ್ರಸ್ಥಾನವನ್ನಾಗಿ ಗ್ರಾಮ ಪಂಚಾಯತಿಯನ್ನು ರಚಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ.

ಕೆಂಚಿನಬಂಡಿ ಗ್ರಾಮವು ಕಂದಾಯ ಗ್ರಾಮವಾಗಿದ್ದು, ಉಳಿದ ಗ್ರಾಮಗಳು ಮಜರೆ ಗ್ರಾಮಗಳಾಗಿರುವುದರಿಂದ ಹಾಗೂ ಕೆಂಚಿನಬಂಡಿ ಗ್ರಾಮಕ್ಕೆ 2011ರ ಜನಸಂಖ್ಯೆ ಪ್ರಕಾರ 1353 ಜನಸಂಖ್ಯೆ ಇರುತ್ತದೆ. ಉಳಿದ ಮಜರೆ ಗ್ರಾಮಗಳಿಗೆ 2011ರ ಜನಸಂಖ್ಯೆ ಪ್ರಕಾರ ಜನಸಂಖ್ಯೆ ಇರುವುದಿಲ್ಲ. ಮಜರೆ ಗ್ರಾಮಗಳ ಜನಸಂಖ್ಯೆಯು ಚಿಂತ್ರಪಳ್ಳಿ ಗ್ರಾಮದ ಜನಸಂಖ್ಯೆಯಲ್ಲಿ ಸೇರಿರುವುದನ್ನು ಬ್ಲಾಕ್ ವೈಸ್ ಬೇರ್ಪಡಿಸಿ ಜನಸಂಖ್ಯೆಯನ್ನು ತಹಶೀಲ್ದಾರರು ನಿಗದಿಪಡಿಸಿರುತ್ತಾರೆ. ಕಾರಣ ತಹಶೀಲ್ದಾರರು ಮತ್ತು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹಗರಿಬೊಮ್ಮನಹಳ್ಳಿ ಇವರ ಶಿಫಾರಸ್ಸಿನ ಮೇರೆಗೆ ಹಾಗೂ ಸಾರ್ವಜನಿಕ ಹಿತ ದೃಷ್ಟಿಯಿಂದ ಸಾರ್ವಜನಿಕರ ಅಭಿಪ್ರಾಯದ ಮೇರೆಗೆ ವಲ್ಲಭಾಪುರ ಗ್ರಾಮವನ್ನು ಗ್ರಾಮ ಪಂಚಾಯತಿಯನ್ನಾಗಿ ರಚನೆ ಮಾಡಲು ಹಾಗೂ ಕೇಂದ್ರ ಸ್ಥಾನವನ್ನಾಗಿ ಘೋಷಿಸಲು ಬಳ್ಳಾರಿ ಜಿಲ್ಲಾಧಿಕಾರಿಗಳು ತಮ್ಮ ಪ್ರಸ್ತಾವನೆಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ವಲ್ಲಭಾಪುರ ಗ್ರಾಮ ಪಂಚಾಯತಿಯನ್ನು ಅಭಿವೃದ್ಧಿ ಹಾಗೂ ಆಡಳಿತಾತ್ಮಕ ಕಾರಣಗಳಿಂದಾಗಿ ರಚಿಸಬೇಕಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಒಳಪಟ್ಟು, ಒಂದು ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಒಳಗೊಂಡಿರುವ ಯಾವುದೇ ಪ್ರದೇಶವನ್ನು ಪಂಚಾಯತಿ ಪ್ರದೇಶವೆಂದು ಘೋಷಿಸಲು ಜಿಲ್ಲಾಧಿಕಾರಿಗಳು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. ಆದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ವಲ್ಲಭಾಪುರ ಗ್ರಾಮ ಪಂಚಾಯತಿಯನ್ನು ರಚಿಸಬಹುದಾಗಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 530 ಗ್ರಾಪಂಅ 2016,**
**ಬೆಂಗಳೂರು, ದಿನಾಂಕ:20.01.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಚಿಂತ್ರಪಳ್ಳಿ ಗ್ರಾಮ ಪಂಚಾಯತಿಯಿಂದ ಹಗರಿಬೊಮ್ಮನಹಳ್ಳಿ ಪುರಸಭೆಗೆ ಸೇರ್ಪಡೆಯಾಗದೇ ಹಾಗೇ ಉಳಿದ ಗ್ರಾಮಗಳಾದ ಕೆಂಚಿನಬಂಡಿ, ಬ್ಯಾಲಹುಣಸೆ(ಮ), ಬಂಡಿಹಳ್ಳಿ(ಮ) ಮತ್ತು ವಲ್ಲಭಾಪುರ(ಮ) ಗ್ರಾಮಗಳನ್ನೊಳಗೊಂಡ ವಲ್ಲಭಾಪುರ ಗ್ರಾಮ ಪಂಚಾಯತಿಯನ್ನು ಹೊಸದಾಗಿ ರಚಿಸಲು ಸರ್ಕಾರ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 281 ವೆಚ್ಚ-6/2016, ದಿನಾಂಕ 14.09.2016 ರ ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ. ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಪ್ರಾದೇಶಿಕ ಆಯುಕ್ತರು, ಕಲಬುರಗಿ
3. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.
5. ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-6)/ಯೋಜನಾ ಇಲಾಖೆ.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
12. ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
13. ಗಣಕ ಕೋಶ – ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
14. ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.